ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ರಾಜ್ಯದಲ್ಲಿ ಅವಧಿ ಮುಗಿದ ಪಾಲಿಕೆಗಳ ಚುನಾವಣೆ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

197(223) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಹುಬ್ಬಳ್ಳಿ-ಧಾರವಾಡ ಬೆಳಗಾವಿ, ವಿಜಯಪುರ, ಬಳ್ಳಾರಿ, ಕಲಬುರಗಿ ಮಹಾನಗರ ಪಾಲಿಕೆಗಳಲ್ಲಿ ಸಕಾಲಕ್ಕೆ ಚುನಾವಣೆ ನಡೆಸದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಪ್ರತಿಯೊಂದು ಪಾಲಿಕೆಯ ಅವಧಿ ಮುಗಿದಾಗಲೂ ಸಾರ್ವಜನಿಕರು ಕೋರ್ಟ್ ಮೊರೆ ಹೋಗಿ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವವರೆಗೆ ಕಾಯುವ ಸರ್ಕಾರದ ಈ ವಿಳಂಬ ನೀತಿಗೆ ಕಾರಣಗಳೇನು; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ವಾರ್ಡ್ ವಿಭಜನೆ, ಮೀಸಲು ನಿಗದಿ ಮತ್ತು ಇನ್ನಿತರೆ ಕಾರ್ಯಗಳನ್ನು ಸರ್ಕಾರವು ತನ್ನ ಸುಪರ್ದಿಯಿಂದ ರಾಜ್ಯ ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಲು ಚಿಂತನೆ ನಡೆಸಿದೆಯೇ? (ವಿವರ ನೀಡುವುದು)